**Bangalore**
**Regional News**
**22.04.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಕೇಂದ್ರ ಲೋಕಸೇವಾ ಆಯೋಗದ ನಾಗರಿಕ ಸೇವಾ ಪರೀಕ್ಷೆ ಫಲಿತಾಂಶ ಪ್ರಕಟ ; ಅಗ್ರ ೫೦ರ ಶ್ರೇಣಿಯೊಳಗೆ ರಾಜ್ಯದ ಇಬ್ಬರು ಆಯ್ಕೆ

೨. ಯಶಸ್ವಿನಿ ಯೋಜನೆಯಡಿ ಶಸ್ತ್ರ ಚಿಕಿತ್ಸೆಗಳ ದರ ಪರಿಷ್ಕರಣಾ ಸಮಿತಿಯಿಂದ ಮುಖ್ಯಮಂತ್ರಿಗೆ ಶಿಫಾರಸ್ಸು ಸಲ್ಲಿಕೆ

೩. ಜಾತಿ ಗಣತಿ ವರದಿ - ಸಂಪುಟ ಸಭೆಯಲ್ಲಿ ಚರ್ಚಿಸಿದ ಬಳಿಕವೇ ಅಂತಿಮ ತೀರ್ಮಾನ - ಮುಖ್ಯಮಂತ್ರಿ ಸಿದ್ದರಾಮಯ್ಯ

೪. ರಾಜ್ಯದಲ್ಲಿ ಕುಸುಮ್-ಎ ಯೋಜನೆ ಜಾರಿಗೆ ತರಲು ರಾಜ್ಯ ಸರ್ಕಾರ ನಿರ್ಧಾರ

**<><*<><>*><>**

ಕೇಂದ್ರ ಲೋಕಸೇವಾ ಆಯೋಗ ನಾಗರಿಕ ಸೇವಾ ಪರೀಕ್ಷೆ ೨೦೨೪ ರ ಅಂತಿಮ ಫಲಿತಾಂಶ ಪ್ರಕಟಿಸಿದೆ. ೭೨೫ ಪುರುಷರು, ೨೮೪ ಮಹಿಳೆಯರು ಸೇರಿದಂತೆ ಒಟ್ಟು ೧ ಸಾವಿರದ ೯ ಅಭ್ಯರ್ಥಿಗಳನ್ನು ನೇಮಕಾತಿಗಾಗಿ ಶಿಫಾರಸ್ಸು ಮಾಡಿದೆ. ಅಗ್ರ ೫೦ರ ಶ್ರೇಣಿಯೊಳಗೆ ರಾಜ್ಯದ ಇಬ್ಬರು ವೈದ್ಯರು ಆಯ್ಕೆಯಾಗಿದ್ದಾರೆ. ರಾಜ್ಯದ ಆರ್. ರಂಗಮಂಜು ೨೪ನೇ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ. ಡಾ. ಸಚಿನ್ ಹರಿಹರ ೪೧ ನೇ ರ್‍ಯಾಂಕ್ ಗಳಿಸಿದ್ದಾರೆ. ಉಳಿದಂತೆ ರಾಜ್ಯದ ಸುಮಾರು ೨೫ಕ್ಕೂ ಹೆಚ್ಚು ಮಂದಿ ಉತ್ತೀರ್ಣರಾಗಿದ್ದಾರೆ. ಕೋಲಾರ ತಾಲೂಕಿನ ಇರಗಸಂದ್ರ ಗ್ರಾಮದ, ಎ.ಮಧು. ಮೂರು ಬಾರಿ ಯುಪಿಎಸ್ಸಿ ಸಂದರ್ಶನ ಎದುರಿಸಿ, ನಾಲ್ಕನೇ ಬಾರಿಗೆ ಯಶಸ್ಸು ಸಾಧಿಸಿದ್ದಾರೆ. ಸಾಗರದ ವಿಕಾಸ್ ೨೮೮ನೇ ರ್‍ಯಾಂಕ್‌ನೊಂದಿಗೆ ಮೊದಲ ಪ್ರಯತ್ನದಲ್ಲೇ ಆಯ್ಕೆಯಾಗಿದ್ದಾರೆ. ಪ್ರಸ್ತುತ ದೆಹಲಿಯ ಡಿಆರ್‌ಡಿಒ ದಲ್ಲಿ ವಿಜ್ಞಾನಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆಕಾಶವಾಣಿಗೆ ತಮ್ಮ ಸಂತಸವನ್ನು ಹಂಚಿಕೊಂಡಿದ್ದಾರೆ.

ಧ್ವನಿ : ವಿಕಾಸ್

**<><*<><>*><>**

ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯಡಿ ನೀಡುತ್ತಿರುವ ಶಸ್ತ್ರ ಚಿಕಿತ್ಸೆಗಳ ದರ ಪರಿಷ್ಕರಣೆ ಕುರಿತು ಶಾಸಕ ಡಾ. ಶ್ರೀನಿವಾಸ ಎನ್.ಟಿ ಅಧ್ಯಕ್ಷತೆಯಲ್ಲಿ ರಚಿಸಿರುವ ದರ ಪರಿಷ್ಕರಣೆ ಸಮಿತಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಇಂದು ಶಿಫಾರಸ್ಸು ಸಲ್ಲಿಸಿದೆ. ಪರಿಷ್ಕೃತ ಯಶಸ್ವಿನಿ ಯೋಜನೆಯನ್ನು ರಾಜ್ಯ ಸರ್ಕಾರವು ೨೦೨೨-೨೩ ರಿಂದ ಮರುಜಾರಿಗೊಳಿಸಿದೆ. ಪ್ರಸ್ತುತ ಯಶಸ್ವಿನಿ ಯೋಜನೆಯಲ್ಲಿನ ಚಿಕಿತ್ಸಾ ದರಗಳು ೨೦೧೭-೧೮ ಅವಧಿಯಲ್ಲಿ ನಿಗದಿ ಮಾಡಿದ ದರಗಳಾಗಿವೆ.  ಸಮಿತಿಯಲ್ಲಿ ಪ್ರತಿಷ್ಠಿತ ಆಸ್ಪತ್ರೆಗಳ ೮ ತಜ್ಞ ವೈದ್ಯರಲ್ಲದೇ ವಿವಿಧ ವೈದ್ಯಕೀಯ ವಿಭಾಗಗಳ ೧೧ ವಿಶೇಷ ಆಹ್ವಾನಿತ ತಜ್ಞ ವೈದ್ಯರಿದ್ದು, ೧೩ ಸಭೆಗಳನ್ನು ನಡೆಸಿ ಅವರಿಂದ ಸಲಹೆ ಸೂಚನೆಗಳನ್ನು ಪಡೆದು ದರ ಪರಿಷ್ಕರಣೆ ಮಾಡಲಾಗಿದೆ.

<><*<><>*><>

ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ನೀಡಿದ ವರದಿ ಸರಿಯಿಲ್ಲವೆಂದು ಹೇಳಲು ಬಿಜೆಪಿಯವರಿಗೆ ನೈತಿಕ ಹಕ್ಕಿಲ್ಲ  ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾತಿಗಣತಿ ವರದಿಯಲ್ಲಿ ಯಾವುದೇ ನ್ಯೂನ್ಯತೆಗಳಿದ್ದರೆ ಸರಿಪಡಿಸಲಾಗುವುದು ಎಂದು ಹೇಳಿದ್ದಾರೆ. ವರದಿ ಬಗ್ಗೆ ಅಭಿಪ್ರಾಯ ವ್ಯಕ್ತಪಡಿಸುವಂತೆ ಸಚಿವರಿಗೆ ತಿಳಿಸಲಾಗಿದ್ದು, ಸಚಿವ ಸಂಪುಟ ಸಭೆಯಲ್ಲಿ ಪರಿಶೀಲಿಸಿ ನಂತರ ಸೂಕ್ತ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಮಾತನಾಡಿದ ಅವರು, ರಾಜ್ಯದಲ್ಲಿ ಹಿಂದಿ ಹೇರಿಕೆಗೆ ಅವಕಾಶವಿಲ್ಲ ಎಂದು ತಿಳಿಸಿದ್ದಾರೆ. ಕೇಂದ್ರ ಸರ್ಕಾರ ಹಿಂದಿ ಭಾಷೆಯನ್ನು ಹೇರುವ ಪ್ರಯತ್ನಕ್ಕೆ ಸರ್ಕಾರದ ವಿರೋಧವಿದೆ ಎಂದು ಹೇಳಿದ್ದಾರೆ.

<><*<><>*><>

ಜನರೇ ವಿದ್ಯುತ್ ಉತ್ಪಾದಿಸಿ ಬಳಸಲು ಉತ್ತೇಜನ ನೀಡುವ ಕುಸುಮ್-ಎ ಯೋಜನೆಯನ್ನು ರಾಜ್ಯದಲ್ಲಿ ಜಾರಿಗೆ ತರುವ ಕುರಿತು ಕೇಂದ್ರ ಸರ್ಕಾರದೊಂದಿಗೆ ಮಾತುಕತೆ ನಡೆಸಲು ಉದ್ದೇಶಿಸಲಾಗಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ. ಚಿಕ್ಕಮಗಳೂರಿನ ಕಡೂರಿನಲ್ಲಿ ರೈತ ಬಜಾರ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, "ಈಗಾಗಲೇ ರಾಜ್ಯದಲ್ಲಿ ಕುಸುಮ್-ಬಿ ಮತ್ತು ಕುಸುಮ್-ಸಿ ಯೋಜನೆ ಅನುಷ್ಠಾನದಲ್ಲಿದೆ. ಇದರೊಂದಿಗೆ ಕುಸುಮ್-ಎ ಯೋಜನೆಯನ್ನೂ ಜಾರಿಗೊಳಿಸುವ ಕುರಿತು ಚಿಂತಿಸಲಾಗಿದೆ ಎಂದು ಹೇಳಿದ್ದಾರೆ. "ಕುಸುಮ್-ಎ ಯೋಜನೆಯಡಿ ರೈತರು, ಸಹಕಾರಿ ಸಂಸ್ಥೆಗಳು, ಪಂಚಾಯತ್‌ಗಳು, ರೈತ ಉತ್ಪಾದಕರ ಸಂಸ್ಥೆಗಳು, ನೀರು ಬಳಕೆದಾರರ ಸಂಘಗಳು ವಿದ್ಯುತ್ ಉಪ ಕೇಂದ್ರಗಳಿಂದ ೫

ಕಿಲೋಮೀಟರ್ ಒಳಗೆ ೫೦೦ ಕಿಲೋ ವ್ಯಾಟ್ ನಿಂದ ಗರಿಷ್ಠ ೧ ಮೆಗಾ ವ್ಯಾಟ್ ವರೆಗೆ ಸೌರ ವಿದ್ಯುತ್ ಸ್ಥಾವರಗಳನ್ನು ಸ್ಥಾಪಿಸಬಹುದು. ಅಲ್ಲಿ ಉತ್ಪಾದನೆಯಾಗುವ ವಿದ್ಯುತ್ತನ್ನು ಅವರೇ ಬಳಸಿಕೊಳ್ಳಬಹುದು.

<><*<><>*><>

ಕಾಶ್ಮೀರದಲ್ಲಿ ಕನ್ನಡಿಗರು ಉಗ್ರರ ದಾಳಿಗೆ ಗುರಿಯಾಗಿರುವ ಸುದ್ದಿ ತಿಳಿಯುತ್ತಿದ್ದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳ ಸಭೆ ನಡೆಸಿ ಮಾಹಿತಿ ಪಡೆದುಕೊಂಡಿದ್ದಾರೆ. ಮುಖ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡ ಮುಖ್ಯಮಂತ್ರಿಯವರು ತಕ್ಷಣ ಕಾರ್ಯಪ್ರವತ್ತರಾಗುವಂತೆ ಸೂಚನೆ ನೀಡಿದ್ದಾರೆ. ಮುಖ್ಯಮಂತ್ರಿ ಅವರ ಸೂಚನೆ ಮೇರೆಗೆ ಅಧಿಕಾರಿಗಳ ಒಂದು ತಂಡ ಕಾಶ್ಮೀರಕ್ಕೆ ಪ್ರಯಾಣ ಬೆಳೆಸಿದೆ. ಮುಂದಿನ ಕ್ರಮಗಳ ಉಸ್ತುವಾರಿ ನೋಡಿಕೊಳ್ಳುವಂತೆ ದೆಹಲಿಯ ನಿವಾಸಿ ಆಯುಕ್ತರಿಗೆ ಸೂಚನೆ ನೀಡಲಾಗಿದೆ.

<><*<><>*><>

ಕೇಂದ್ರದ ಸರ್ಕಾರದ ಬೆಲೆ ಏರಿಕೆ ವಿರುದ್ಧ ಇದೇ ೧೭ ಮತ್ತು ೧೮ ರಂದು ಕಾಂಗ್ರೆಸ್ ಪ್ರತಿಭಟನೆ ನಡೆಸಲಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹಾಗೂ ಮಹಿಳಾ ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳಕರ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಲೆ ಏರಿಕೆ ಹಾಗೂ ಸಂವಿಧಾನ ಬಚಾವೋ ಹೋರಾಟ ನಡೆಸಲಾಗುವುದು ಎಂದು ಹೇಳಿದ್ದಾರೆ. ಬಿಜೆಪಿ ತಮ್ಮ ವೈಫಲ್ಯವನ್ನ ಮುಚ್ಚಿಕೊಳ್ಳಲು ಜನಾಕ್ರೋಶ ಯಾತ್ರೆ ನಡೆಸುತ್ತಿದೆ ಎಂದು ಆರೋಪಿಸಿದ್ದಾರೆ. ಬೆಳಗಾವಿಯ ಸಿಪಿಎಡ್ ಮೈದಾನದಲ್ಲಿ ಪ್ರತಿಭಟನೆ ನಡೆಯಲಿದೆ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದ್ದಾರೆ.

<><*<><>*><>

ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ವಿದೇಶದಲ್ಲಿ ಭಾರತವನ್ನು ಅವಮಾನಿಸಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಗದಗದಲ್ಲಿ ನಡೆದ ಜನಾಕ್ರೋಶ ಯಾತ್ರೆಗೆ ಚಾಲನೆ ನೀಡಿದ ಅವರು, ರಾಜ್ಯ ಸರ್ಕಾರದ ಜನ ವಿರೋಧಿ ನೀತಿಯನ್ನು ಖಂಡಿಸಿದರು. ಅಲ್ಪ ಸಂಖ್ಯಾತರ ಓಲೈಕೆ ಮಾಡುವ ನಿಟ್ಟಿನಲ್ಲಿ ಹಿಂದೂ ಸಮುದಾಯಕ್ಕೆ ಅನ್ಯಾಯ ಮಾಡುತ್ತಿದ್ದಾರೆ ಎಂದು ದೂರಿದರು. ಕಳೆದ ೧೦ ತಿಂಗಳಿಂದ ಗದಗ ಜಿಲ್ಲೆ ಸೇರಿದಂತೆ ಯಾವುದೇ ಜಿಲ್ಲೆಯಲ್ಲಿ ಹೊಸ ಯೋಜನೆ ಕಾರ್ಯಾರಂಭ ಮಾಡಿಲ್ಲ ಎಂದು ಆಪಾದಿಸಿದರು.

<><*<><>*><>

ದೇವರನ್ನು ಪೂಜಿಸುವವರಿಗೆ ಆಷಾಡಭೂತಿತನ ಇರಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ನಾಗಮಂಗಲ ತಾಲ್ಲೂಕಿನ ಬಿಂಡಿಗನವಿಲೆ ಹೋಬಳಿಯ ದೊಡ್ಡಬಾಲ ಗ್ರಾಮದಲ್ಲಿ ೩೯ ವರ್ಷಗಳ ಬಳಿಕ ನಡೆಯುತ್ತಿರುವ ಹುಚ್ಚಪ್ಪಸ್ವಾಮಿ ಹಾಗೂ ಹದಿನಾಲ್ಕು ಕೂಟದ ದೇವರುಗಳ ಜಾತ್ರಾ ಮಹೋತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸಂವಿಧಾನ ಕೊಟ್ಟ ಅವಕಾಶದಿಂದ ಶಿಕ್ಷಣ ಪಡೆದು ನಾನು ಮುಖ್ಯಮಂತ್ರಿಯಾದೆ. ಅಂಬೇಡ್ಕರ್ ಶಿಕ್ಷಣಕ್ಕೆ ಪ್ರಥಮ ಆದ್ಯತೆ ನೀಡಿದ್ದು, ಪ್ರತಿಯೊಬ್ಬರೂ ಇದನ್ನು ಪಾಲಿಸಬೇಕು ಎಂದು ಹೇಳಿದ್ದಾರೆ.

<><*<><>*><>

ಬೆಂಗಳೂರು ಪಶ್ಚಿಮ ಆಯುಕ್ತಾಲಯದ ಜಿಎಸ್‌ಟಿ ಕೇಂದ್ರ ತೆರಿಗೆ ವಿಭಾಗದ ವತಿಯಿಂದ ಬೆಂಗಳೂರಿನ ಜಾಲಹಳ್ಳಿಯಲ್ಲಿರುವ ಕಸ್ಟಮ್ಸ್ ಪರೋಕ್ಷ ತೆರಿಗೆ ಮತ್ತು ಮಾದಕ ದ್ರವ್ಯಗಳ ರಾಷ್ಟ್ರೀಯ ಸಂಸ್ಥೆಯ ಆವರಣದಲ್ಲಿ ಇದೇ ೨೬ ರಂದು ೧೫ನೇ ಆವೃತ್ತಿಯ ಉದ್ಯೋಗ ಮೇಳ ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ವರ್ಚುವಲ್ ಮೂಲಕ ಪಾಲ್ಗೊಂಡು ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಕೇಂದ್ರ ಸಚಿವರು, ಸಂಸದರು, ಶಾಸಕರು, ಕೇಂದ್ರ ಸರ್ಕಾರದ ಇಲಾಖೆ ಹಾಗೂ ಸಂಸ್ಥೆಗಳ ಅಧಿಕಾರಿಗಳು, ನೂತನವಾಗಿ ನೇಮಕಗೊಂಡ ಅಭ್ಯರ್ಥಿಗಳು ಸೇರಿದಂತೆ ಸುಮಾರು ೪೦೦ ಜನರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

<><*<><>*><>

ಇಂದು ವಿಶ್ವ ಭೂಮಿ ದಿನ. ಭೂಮಿ ದಿನಾಚರಣೆಯು ಕೇವಲ ಒಂದು ದಿನದ ಕಾರ್ಯಕ್ರಮಕ್ಕೆ ಸೀಮಿತವಾಗಿರದೆ ನಿತ್ಯವು ಭೂಮಿ ಬಗ್ಗೆ ಎಲ್ಲರೂ ಜಾಗೃತಿ ಹೊಂದಬೇಕು ಎಂದು ಚಿಕ್ಕಮಗಳೂರು ಜಿಲ್ಲೆಯ ಮುಳ್ಳಯ್ಯನಗಿರಿ ಉಳಿಸಿ ವೇದಿಕೆ ಕಾರ್ಯದರ್ಶಿ ಹಾಗೂ ಪರಿಸರವಾದಿ ಗುರುವೇಶ್ ತಿಳಿಸಿದ್ದಾರೆ. ಚಿಕ್ಕಮಗಳೂರು ನಗರದಲ್ಲಿಂದು ವಿಶ್ವ ಭೂಮಿ ದಿನಾಚರಣೆ ಅಂಗವಾಗಿ ಆಕಾಶವಾಣಿಯೊಂದಿಗೆ ಮಾತನಾಡಿದ ಅವರು  ವರ್ಷದ ೩೬೫ ದಿನಗಳಲ್ಲಿ ೩೦೦ ದಿನಗಳಾದರು ಭೂಮಿ. ಪರಿಸರ, ಜಲ, ಮರ ಗಿಡಗಳ ಬೆಗ್ಗೆ ಕಾಳಜಿ ಹೊಂದಬೇಕು ಎಂದು ತಿಳಿಸಿದ್ದಾರೆ.

ಧ್ವನಿ : ಗುರುವೇಶ್ ( ೨೭ ಸೆಕೆಂಡ್ಸ್)

<><*<><>*><>

ಬಿಬಿಎಂಪಿಯು ಸಾರ್ವಜನಿಕರ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದ್ದಾರೆ. ವಿಜಯವಾಡ ಮುನ್ಸಿಪಾಲ್ ಕಾರ್ಪೊರೇಷನ್ ಉಪ ಮೇಯರ್ ನಿಯೋಗವು ಇಂದು ಬಿಬಿಎಂಪಿ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾರ್ಯಗಳ ಕುರಿತ ಅಧ್ಯಯನಕ್ಕಾಗಿ ನಗರಕ್ಕೆ ಆಗಮಿಸಿತ್ತು. ಈ ವೇಳೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಂಪೂರ್ಣ ಕಾರ್ಯವೈಖರಿಯ ಕುರಿತು ವಿಜಯವಾಡ ಪಾಲಿಕೆಯ ನಿಯೋಗಕ್ಕೆ ತುಷಾರ್ ಗಿರಿನಾಥ್ ವಿವರಣೆ ನೀಡಿದರು. ನಗರದಲ್ಲಿ ಪ್ರಮುಖವಾಗಿ ಕಸ ವಿಲೇವಾರಿ, ವಿದ್ಯುತ್ ದೀಪ, ರಸ್ತೆ ಗುಂಡಿಗಳು, ರಾಜಕಾಲುವೆ ಹಾಗೂ ಸೈಡ್ ಡ್ರೈನ್‌ಗಳ ಸ್ವಚ್ಛತೆ ಮಾಡುವುದು ಸವಾಲಿನ ವಿಷಯಗಳಾಗಿದ್ದು, ಅವುಗಳ ಮೇಲೆ ಹೆಚ್ಚಿನ ಆದ್ಯತೆ ನೀಡಿ ಇರುವ ಸಮಸ್ಯೆಗಳನ್ನು ಬಗಹೆರಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಘನ ತ್ಯಾಜ್ಯ ವಿಲೇವಾರಿಗಾಗಿ ಪ್ರತ್ಯೇಕವಾಗಿ ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತವನ್ನು ಸ್ಥಾಪಿಸಲಾಗಿದೆ. ರಸ್ತೆಗಳು ಹೆಚ್ಚು ಬಾಳಿಕೆ ಬರಬೇಕೆಂಬ ಉದ್ದೇಶದಿಂದ ಟೆಂಡರ್ ಶ್ಯೂರ್ ಹಾಗೂ ವೈಟ್ ಟಾಪಿಂಗ್ ರಸ್ತೆಗಳನ್ನು ನಿರ್ಮಾಣ ಮಾಡಲಾಗುತ್ತಿದೆ ಎಂದು ಹೇಳಿದರು.

<><*<><>*><>

ಇನ್ನು ಹವಾವರ್ತಮಾನ,

ರಾಜ್ಯದ ಒಳನಾಡಿನ ಕೆಲವೆಡೆ ಮಳೆಯಾಗಿದೆ. ಬೇಲೂರು ೩, ತಿಪಟೂರು ೨, ಬೆಳ್ತಂಗಡಿ, ಕೆಂಭಾವಿ, ಧಾರವಾಡ ಪಿಟಿಒ ತಲಾ ೧ ಸೆಂಟಿ ಮೀಟರ್ ಮಳೆಯಾಗಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>